ಈ ದಿನ ದಿನಾಂಕಃ 15.10.2025 ರಂದು ಸಾಕ್ಷಿಯನ್ನು ಇಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**<u>ಪಾಟೀಸವಾಲು ವಾದಿ ಪರ ವಕೀಲರಿಂದಃ</u>**

1ನೇ ವಾದಿ ನನ್ನ ತಾಯಿ. 2 ಮತ್ತು 3 ನೇ ವಾದಿಗಳು ನನ್ನ ಅಕ್ಕಂದಿರು. 2ನೇ ಪ್ರತಿವಾದಿ ನನ್ನ ಮಗ. 3ನೇ ಪ್ರತಿವಾದಿ ಆಸ್ತಿಯನ್ನು ನಮ್ಮಿಂದ ಖರೀದಿ ಮಾಡಿದವರು. ದಾವಾ ಆಸ್ತಿಯನ್ನು ನನ್ನ ತಂದೆ ಪಿ ಮಹಮದ್ ದಸ್ತಗಿರ್ ಬಿನ್ ಮಹಮದ್ ಖಾಸೀಂ ಸಾಬ್ ರವರಿಂದ ದಿಃ 06.12.1991 ರಂದು ಖರೀದಿಸಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಸದರಿ ಸ್ವತ್ತನ್ನು ನಾನೇ ಖರೀದಿ ಮಾಡಿರುತ್ತೇನೆಂದು ನುಡಿಯುತ್ತಾರೆ. ಸದರಿ ಆಸ್ತಿಯನ್ನು ನಾನೇ ಖರೀದಿಸಿರುತ್ತೇನೆಂದು ತೋರಿಸಲು ದಾಖಲೆ ಇರುವುದಿಲ್ಲ ಆದರೆ ಸಾಕ್ಷಿ ಇರುತ್ತದೆ ಎಂದು ನುಡಿಯುತ್ತಾರೆ. ನನ್ನ ತಂದೆ ದಾವಾ ಆಸ್ತಿ ಖರೀದಿಸಿದ ನಂತರ ಎಂ ಆರ್ ನಂ. 50/1991-92 ರಂತೆ ಹಕ್ಕು ಬದಲಾವಣೆ ಆಗಿರುತ್ತದೆ ಎಂದರೆ ಸರಿ. ನನ್ನ ತಂದೆ ಹೆಸರಿಗೆ ಖಾತೆ ಹಾಗೂ ಪಹಣಿಗಳು ಇರುತ್ತವೆ ಎಂದರೆ ಸರಿ.

2. ನನ್ನ ತಂದೆ 1998 ನೇ ಸಾಲಿನಲ್ಲಿ ಮರಣ ಹೊಂದಿರುತ್ತಾರೆ. ನನ್ನ ತಂದೆ ಮರಣದ ನಂತರ ನಾನೇ ವಾರಸುದಾರನೆಂದು ಖಾತೆ ಬದಲಾವಣೆ ಮಾಡುವಂತೆ ಅರ್ಜಿ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನನ್ನ ತಾಯಿ ಹೆಣ್ಣು ಮೊಮ್ಮಕ್ಕಳ ಮದುವೆ ಮಾಡು ನಂತರ ಆಸ್ತಿ ನಿನ್ನ ಹೆಸರಿಗೆ ಬದಲಾವಣೆ ಮಾಡಿಸಿಕೋ ಎಂದು ತಿಳಿಸಿರುತ್ತಾರೆ ಎಂದು ನುಡಿಯುತ್ತಾರೆ. ನನ್ನ ತಂದೆ ಜೀವಿತ ಕಾಲದಲ್ಲಿ ನೊಂದಾಯಿತ ಪತ್ರದ ಮೂಲಕ ನನ್ನ ಹೆಸರಿಗೆ ಆಸ್ತಿಯನ್ನು ವರ್ಗಾವಣೆ ಮಾಡಿರುವುದಿಲ್ಲ ಎಂದರೆ ಸರಿ.

ಮುಂದುವರೆದ ಪಾಟೀಸವಾಲಿಗೆ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದುವರೆದ ಪಾಟೀಸವಾಲಿಗೆ ಕಾಲಾವಕಾಶ ನೀಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಪಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

C/c 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ.ಚನ್ನಗಿರಿ.